ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

ಸಂಖ್ಯೆ : ವಾಇ : ಜಂ ನಿ : ಸುಮಪ : 2021–22 ದಿನಾಂಕ : 16–08–2021

# ಪತ್ರಿಕಾ ಪ್ರಕಟಣೆ

**PRESS RELEASE**

## ಛಾಯಾಚಿತ್ರ ಶೀರ್ಷಿಕೆ:

ಬೆಂಗಳೂರು ಆಗಸ್ಟ್ 16 (ಕರ್ನಾಟಕ ವಾರ್ತೆ) :

ಗೌರವಾನ್ವಿತ ಉಪರಾಷ್ಟ್ರಪತಿ ವೆಂಕಯ್ಯ ನಾಯ್ಡು ಅವರನ್ನು ಇಂದು ಘನತೆವೆತ್ತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಬೆಂಗಳೂರಿನ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಸ್ವಾಗತಿಸಿದರು. ಈ ಸಂದರ್ಭದಲ್ಲಿ ಬಸವರಾಜ್ ಎಸ್ ಬೊಮ್ಮಾಯಿ, ಸಚಿವರಾದ ಅಶ್ವಥ್ ನಾರಾಯಣ್, ಸಂಸದರಾದ ಪಿ ಸಿ ಮೋಹನ್ ಸೇರಿದಂತೆ ಮುಂತಾದ ಗಣ್ಯರು ಉಪಸ್ಥಿತರಿದ್ದರು.

ಘನತೆವೆತ್ತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಉಪರಾಷ್ಟ್ರಪತಿ ವೆಂಕಯ್ಯ ನಾಯ್ಡು ಅವರನ್ನು ಇಂದು ರಾಜಭವನದ ಮುಖ್ಯದ್ವಾರದಲ್ಲಿ ಆತ್ಮೀಯವಾಗಿ ಬರಮಾಡಿಕೊಂಡರು.

Shri M.Venkaiah Naidu, Hon’ble Vice President of India was received by Shri Thaawarchand Gehlot, Hon’ble Governor of Karnataka at KIAL, Bengaluru.
Shri Basavaraj Bommai, Hon’ble Chief Minister of Karnataka, Dr. C.N. Ashwath Narayan, Hon’ble Minister for Higher Education and Shri P.C.Mohan, MP were present.

Shri M.Venkaiah Naidu Hon’ble Vice President of India was received by Shri Thaawarchand Gehlot, Hon’ble Governor of Karnataka at Raj Bhavan Portico.

ಉಪರಾಷ್ಟ್ರಪತಿ ವೆಂಕಯ್ಯ ನಾಯ್ಡು ಅವರು ಸೋಮವಾರ ಬೆಂಗಳೂರಿನ ಜಕ್ಕೂರಿನಲ್ಲಿರುವ ಜವಾಹರಲಾಲ್ ನೆಹರು ಅನ್ವಯಿಕ ವೈಜ್ಞಾನಿಕ ಸಂಶೋಧನ ಸಂಸ್ಥೆಗೆ ಭೇಟಿ ನೀಡಿ, ನಾವಿನ್ಯತೆ ಮತ್ತು ಅಭಿವೃದ್ಧಿ ಕೇಂದ್ರ ನಿರ್ಮಾಣಕ್ಕೆ ಶಿಲನ್ಯಾಸವನ್ನು ನೇರವೇರಿಸಿದರು.
ಈ ಸಂದರ್ಭದಲ್ಲಿ ಗೌರವಾನ್ವಿತ ರಾಜ್ಯಪಾಲರಾದ ಶ್ರೀ ಥಾವರ್ ಚಂದ್ ಗೆಹ್ಲೋಟ್, ಸನ್ಮಾನ್ಯ ಮುಖ್ಯಂತ್ರಿ ಬಸವರಾಜ್ ಬೊಮ್ಮಾಯಿ, ಭಾರತ ರತ್ನ ಸಿ ಎನ್ ಆರ್ ರಾವ್, ಜವಾಹರಲಾಲ್ ನೆಹರು ಅನ್ವಯಿಕ ವೈಜ್ಞಾನಿಕ ಸಂಶೋಧನ ಸಂಸ್ಥೆಯ ಕುಲಪತಿಗಳಾದ ಜಿ ಯು ಕುಲಕರ್ಣಿ ಸೇರಿದಂತೆ ಮುಂತಾದ ಗಣ್ಯರು ಉಪಸ್ಥಿತರಿದ್ದರು.

Shri M.Venkaiah Naidu Hon’ble Vice President of India unveiled the Foundation stone of Innovation & Development Centre, today at Arkavathi Campus, JNCASR.
Shri Thaawarchand Gehlot, Hon’ble Governor of Karnataka & Shri Basavaraj Bommai, Hon’ble Chief Minister of Karnataka were the Chief Guests of the event. Bharat Ratna Prof. C.N.R Rao, Linus Pouling Research Professor & Hon’ble President, JNCASR was also present.

# ನಾವಿನ್ಯತೆ ಮತ್ತು ಅಭಿವೃದ್ಧಿ ಕೇಂದ್ರಕ್ಕೆ ಉಪ ರಾಷ್ಟ್ರಪತಿಗಳಿಂದ ಚಾಲನೆ
# ಕೃಷಿ ಅಭಿವೃದ್ಧಿಗೆ ಪೂರಕವಾದ ಸಂಶೋಧನೆ ಕೈಗೊಳ್ಳಲು ಸಲಹೆ

ಬೆಂಗಳೂರು ಆಗಸ್ಟ್ 16, (ಕರ್ನಾಟಕ ವಾರ್ತೆ):

ಭಾರತ ದೇಶವು ಕೃಷಿ ಪ್ರಧಾನ ದೇಶವಾಗಿದೆ. ದೇಶದ ಬೆನ್ನೆಲುಬಾಗಿರುವ ಕೃಷಿ ವಲಯಕ್ಕೆ ಆದ್ಯತೆ ನೀಡುವ ಮೂಲಕ ರೈತರ ಅಭಿವೃದ್ಧಿಗೆ ಪೂರಕವಾದ ಕೃಷಿ ಸಂಶೋಧನೆಯನ್ನು ವಿಜ್ಞಾನಿಗಳು ಕೈಗೊಳ್ಳಬೇಕು ಎಂದು ಭಾರತದ ಉಪ ರಾಷ್ಟ್ರಪತಿ ವೆಂಕಯ್ಯ ನಾಯ್ದು ಅವರು ಹೇಳಿದರು.

ಐದು ದಿನಗಳ ರಾಜ್ಯ ಪ್ರವಾಸ ಕೈಗೊಂಡಿರುವ ಉಪರಾಷ್ಟ್ರಪತಿ ವೆಂಕಯ್ಯ ನಾಯ್ದು ಅವರು ಸೋಮವಾರ ಬೆಂಗಳೂರಿನ ಜಕ್ಕೂರಿನಲ್ಲಿರುವ ಜವಾಹರಲಾಲ್ ನೆಹರು ಅನ್ವಯಿಕ ವೈಜ್ಞಾನಿಕ ಸಂಶೋಧನಾ ಸಂಸ್ಥೆಗೆ ಭೇಟಿ ನೀಡಿ, ನಾವಿನ್ಯತೆ ಮತ್ತು ಅಭಿವೃದ್ಧಿ ಕೇಂದ್ರ ನಿರ್ಮಾಣಕ್ಕೆ ಶಿಲನ್ಯಾಸವನ್ನು ನೇರವೇರಿಸಿ ಮಾತನಾಡಿದ ಅವರು ಇಂದು ಸಂಶೋಧಕರೊಂದಿಗೆ ಸಂವಹನ ನಡೆಸುತ್ತಿರುವುದು ನನಗೆ ತುಂಬಾ ಸಂತೋಷವನ್ನು ನೀಡುತ್ತದೆ ಎಂದು ಹೇಳಿದರು.

ಮೊದಲಿಗೆ ಕನ್ನಡ ಭಾಷೆಯಲ್ಲಿ ಪ್ರಾರಂಭಿಕ ನುಡಿಗಳನ್ನಾಡಿದ ಮಾನ್ಯ ಉಪರಾಷ್ಟ್ರಪತಿಗಳು, ತನ್ನದೇ ಗುರುತರ ಕೆಲಸಗಳ ಮೂಲಕ ಜವಾಹರಲಾಲ್ ನೆಹರು ಸೆಂಟರ್ ಫಾರ್ ಅಡ್ವಾನ್ಸ್ಡ್ ಸೈಂಟಿಫಿಕ್ ರಿಸರ್ಚ್ ಸೆಂಟರ್ ಜಾಗತಿಕವಾಗಿ ಗುರುತಿಸಿಕೊಂಡಿದೆ. ಈ ಸಂಸ್ಥೆಯು 300 ಪೇಟೆಂಟ್‌ಗಳನ್ನು ತನ್ನದಾಗಿಸಿಕೊಂಡಿದೆಯಲ್ಲದೇ ಗಮನಾರ್ಹ ವೈಜ್ಞಾನಿಕ ಸಂಶೋಧನೆಗಳಿಂದ ಹೆಸರು ಮಾಡಿದೆ. ಕೃಷಿ ಕ್ಷೇತ್ರಕ್ಕೂ ಸಂಸ್ಥೆಯ ಕೊಡುಗೆ ಅಪಾರವಾಗಿದೆ ಎಂದ ಅವರು, ಜವಾಹರಲಾಲ್ ನೆಹರು ಸೆಂಟರ್ ಫಾರ್ ಅಡ್ವಾನ್ಸ್ಡ್ ಸೈಂಟಿಫಿಕ್ ರಿಸರ್ಚ್ ಸೆಂಟರ್ ನ ಸಾಧನೆಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಭಾರತದ ಕೃಷಿ ವಿಶ್ವಾದ್ಯಂತ ಹೆಸರುವಾಸಿ, ಅಂತಹ ಕೃಷಿ ವಲಯವನ್ನು ಅಭಿವೃದ್ಧಿ ಪಡಿಸುವುದು ಎಲ್ಲರ ಜವಾಬ್ದಾರಿಯಾಗಿರುತ್ತದೆ. ಕೃಷಿಯಲ್ಲಿ ವಿವಿಧ ಸಂಶೋಧನೆಗಳನ್ನು ನಡೆಸಿ ರೈತರಿಗೆ ನೆರವಾಗಬೇಕು. ಕೃಷಿ ಆಧಾರಿತ ತಂತ್ರಜ್ಞಾನದ ಅಭಿವೃದ್ಧಿ, ಯುವಪೀಳಿಗೆಗೆ ವೈಜ್ಞಾನಿಕ ಮನೋಭಾವ ಬಿತ್ತುವ ಜೊತೆಗೆ ಸಮಾಜದ ಒಳಿತಿಗಾಗಿ ವೈಜ್ಞಾನಿಕ ಸಂಶೋಧನೆಗಳನ್ನು ನಡೆಸಬೇಕು ಎಂದು ಸಲಹೆ ನೀಡಿದರು.

ಬೆಂಗಳೂರು ಅನೇಕ ಕೆರೆ ಕುಂಟೆಗಳ ತಾಣವಾಗಿದ್ದು, ಸರ್ಕಾರ ಕೆರೆಗಳ ಶುಚಿತ್ವ ಮತ್ತು ಅಭಿವೃದ್ಧಿ ಕಾರ್ಯವನ್ನು ಕೈಗೊಳ್ಳಬೇಕು ಎಂದ ಅವರು, ಭಾರತದ ಅಭಿವೃದ್ಧಿ ಭವಿಷ್ಯದ ಪೀಳಿಗೆಯ ಮೇಲಿದೆ. ಕಠಿಣ ಪರಿಶ್ರಮ ಹಾಗೂ ಶಿಸ್ತಿನಿಂದ ಏನ್ನಾದರೂ ಸಾಧನೆ ಮಾಡಬಹುದು ಎಂಬುದನ್ನು ಅರಿತು ಯುವಪೀಳಿಗೆ ಮುನ್ನಡೆಯಬೇಕು ಎಂದು ಕಿವಿಮಾತು ಹೇಳಿದರು.

ಗೌರವಾನ್ವಿತ ರಾಜ್ಯಪಾಲರಾದ ಶ್ರೀ ಥಾವರ್ ಚಂದ್ ಗೆಹ್ಲೋಟ್ ಅವರು ಮಾತನಾಡಿ, ಕರ್ನಾಟಕ ಅನೇಕ ವಿಚಾರಗಳಲ್ಲಿ ದೇಶಕ್ಕೆ ದೊಡ್ಡ ಕೊಡುಗೆಯನ್ನು ನೀಡಿದೆ, ಕರ್ನಾಟಕ ರಾಜ್ಯವೂ ಪ್ರಗತಿಶೀಲ, ತಂತ್ರಜ್ಞಾನ ಹಾಗೂ ಪವಿತ್ರತೆಯ ನೆಲೆಯಾಗಿರುವುದರ ಜೊತೆಗೆ ಸಮಾನತೆ ಸಾರಿದ ಬಸವಣ್ಣ, ಸಾಧು ಸಂತರು ಸೇರಿದಂತೆ ಭಾರತ ರತ್ನ ಸರ್ ಎಂ ವಿಶ್ವೇಶ್ವರಯ್ಯ ಅವರು ಜನಿಸಿದಂತಹ ತಾಯ್ನಾಡಾಗಿದೆ. ಈ ನಮ್ಮ ಧೀನ ಮಹನೀಯರು ಕಟ್ಟಿದಂತಹ ಕನಸನ್ನು ನನಸು ಮಾಡಲು ಮುಂದಾಗಿರುವ ಯುವ ವಿಜ್ಞಾನಿಗಳಿಗೆ ನಾನು ಅಭಿನಂದನೆ ಸಲ್ಲಿಸುತ್ತೇನೆ ಎಂದು ಹೇಳಿದರು.

ಸಮಾರಂಭದಲ್ಲಿ ಭಾರತ ರತ್ನ ಸಿ ಎನ್ ಆರ್ ರಾವ್, ಸನ್ಮಾನ್ಯ ಮುಖ್ಯಮಂತ್ರಿಗಳಾದ ಬಸವರಾಜ್ ಬೊಮ್ಮಾಯಿ, ಜವಾಹರಲಾಲ್ ನೆಹರು ಅನ್ವಯಿಕ ವೈಜ್ಞಾನಿಕ ಸಂಶೋಧನ ಸಂಸ್ಥೆಯ ಕುಲಪತಿಗಳಾದ ಜಿ ಯು ಕುಲಕರ್ಣಿ ಸೇರಿದಂತೆ ಮುಂತಾದ ಗಣ್ಯರು ಉಪಸ್ಥಿತರಿದ್ದರು.

## ಪ್ಯಾರಾ ಒಲಂಪಿಕ್ಸ್-2020 ಕ್ರೀಡಾಕೂಟದಲ್ಲಿ ಭಾಗಹಿಸುತ್ತಿರುವ ಕ್ರೀಡಾಪಟುಗಳಿಗೆ ಶುಭಹಾರೈಕೆ
### – ಸಚಿವ ಡಾ.ಕೆ.ಸಿ. ನಾರಾಯಣಗೌಡ.

ಬೆಂಗಳೂರು, ಆಗಸ್ಟ್ 16 (ಕರ್ನಾಟಕ ವಾರ್ತೆ):

ಜಪಾನ್ ದೇಶದ ಟೋಕಿಯೋ ನಗರದಲ್ಲಿ ಪ್ಯಾರಾ ಒಲಂಪಿಕ್ಸ್-2020 ಕ್ರೀಡಾಕೂಟವು 2021 ರ ಆಗಸ್ಟ್ 24 ರಿಂದ ಸೆಪ್ಟೆಂಬರ್ 5 ರವರೆಗೆ ನಡೆಯಲಿದೆ. ಈ ಕ್ರೀಡಾಕೂಟದಲ್ಲಿ ಭಾರತ ದೇಶದಿಂದ 54 ಕ್ರೀಡಾಪಟುಗಳು 09 ವಿವಿಧ ಕ್ರೀಡೆಗಳಲ್ಲಿ ಭಾಗವಹಿಸುತ್ತಿದ್ದಾರೆ. ಎಲ್ಲಾ ಕ್ರೀಡಾಪಟುಗಳು ಉತ್ತಮ ಸಾಧನೆ ತೋರಿ ಪದಕ ಗೆದ್ದು, ಭಾರತ ದೇಶದ ಕೀರ್ತಿ ಪತಾಕೆಯನ್ನು ಬಾನೆತ್ತರದಲ್ಲಿ ಹಾರಿಸಲಿ ಎಂದು ಯುವ ಸಬಲೀಕರಣ ಮತ್ತು ಕ್ರೀಡೆ ಹಾಗೂ ರೇಷ್ಮೆ ಸಚಿವರಾದ  ಡಾ.ಕೆ.ಸಿ. ನಾರಾಯಣಗೌಡ ರವರು ಹಾರೈಸಿದರು.

ಕರ್ನಾಟಕ ರಾಜ್ಯದಿಂದ ಇಬ್ಬರು ಕ್ರೀಡಾಪಟುಗಳಾದ ಕು.ಶಕೀನಾ ಖಾತುನ್- ಪ್ಯಾರಾ ಪವರ್ ಲಿಫ್ಟಿಂಗ್, ಕು.ನಿರಂಜನ್ ಮುಕುಂದನ್-ಪ್ಯಾರಾ ಈಜಿನಲ್ಲಿ ಟೋಕಿಯೋ ಪ್ಯಾರಾ ಒಲಂಪಿಕ್ಸ್‌ಗೆ ಅರ್ಹತೆ ಪಡೆದಿರುತ್ತಾರೆ.

ರಾಜ್ಯಕ್ಕೆ ಹೆಮ್ಮೆ ತಂದಿರುವ ಈ ಇಬ್ಬರು ಕ್ರೀಡಾಪಟುಗಳಿಗೆ ತಲಾ ರೂ.10.00 ಲಕ್ಷಗಳ ನಗದು ಪುರಸ್ಕಾರ ನೀಡಿ ಪ್ರೋತ್ಸಾಹಿಸಿದರು. ಕ್ರೀಡಾಪಟುಗಳಿಗೆ ಟೋಕಿಯೋ ಪ್ಯಾರಾ ಒಲಂಪಿಕ್ಸ್‌ನಲ್ಲಿ ಉತ್ತಮ ಸಾಧನೆ ಮಾಡಿ ರಾಜ್ಯಕ್ಕೆ ಕೀರ್ತಿ ತರಲೆಂದು ಶುಭ ಹಾರೈಸಿದರು. ಅಲ್ಲದೆ ಮುಂದಿನ ದಿನಗಳಲ್ಲಿ ಕ್ರೀಡಾ ಸಾಧನೆ ಮಾಡಲು ಪ್ರತಿಭಾವಂತ ಕ್ರೀಡಾಪಟುಗಳಿಗೆ ಎಲ್ಲಾ ರೀತಿಯ ನೆರವು ನೀಡಲು ಸರ್ಕಾರವು ಸದಾ ಸಿದ್ದವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳಾದ ಡಾ.ಶಾಲಿನಿ ರಜನೀಶ್ ಭಾ.ಆ.ಸೇ, ಪ್ಯಾರಾ ಒಲಂಪಿಕ್ ಅಸೋಸಿಯೇಷನ್‌ನ ಅಧ್ಯಕ್ಷರು ಹಾಗೂ ಇತರೆ ಸದಸ್ಯರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಯುಕ್ತರಾದ ವೆಂಕಟೇಶ್‌ಕುಮಾರ್ ಆರ್, ಭಾ.ಆ.ಸೇ., ರಾಜ್ಯ ಒಲಂಪಿಕ್ಸ್ ಅಸೋಸಿಯೇಷನ್ ಅಧ್ಯಕ್ಷ ಗೋವಿದರಾಜು, ಮತ್ತು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಚಿವರ ಪ್ರವಾಸ

ಬೆಂಗಳೂರು ಆಗಸ್ಟ್ 16 (ಕರ್ನಾಟಕ ವಾರ್ತೆ) :

ನಗರಾಭಿವೃದ್ಧಿ ಸಚಿವರು ಹಾಗೂ ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವ ಬಿ.ಎ.ಬಸವರಾಜ (ಬೈರತಿ) ಅವರು ಆಗಸ್ಟ್ 18 ರಂದು ದಾವಣಗೆರೆ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಆಗಸ್ಟ್ 19 ರಂದು ಕೇಂದ್ರ ಸ್ಥಾನಕ್ಕೆ ಆಗಮಿಸಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದ್ದಾರೆ.

## ಅಬಕಾರಿ ಸಚಿವರ ಪ್ರವಾಸ

ಬೆಂಗಳೂರು ಆಗಸ್ಟ್ 16 (ಕರ್ನಾಟಕ ವಾರ್ತೆ) :

ಅಬಕಾರಿ ಸಚಿವರು ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೆ.ಗೋಪಾಲಯ್ಯ ಅವರು ಆಗಸ್ಟ್ 17 ರಂದು ಹಾಸನ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ಕೇಂದ್ರ ಸ್ಥಾನಕ್ಕೆ ಆಗಮಿಸಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದ್ದಾರೆ.

## ಜೈವಿಕ ಉದ್ಯಾನವನದಲ್ಲಿ 75ನೇ ಸ್ವಾತಂತ್ರ್ಯ ದಿನಾಚರಣೆ ಆಚರಣೆ

ಬೆಂಗಳೂರು ಆಗಸ್ಟ್ 16 (ಕರ್ನಾಟಕ ವಾರ್ತೆ) :

"ಆಜಾದಿ ಕಾ ಅಮೃತ್ ಮಹೋತ್ಸವದ" ಸಂದರ್ಭದಲ್ಲಿ, ಬನ್ನೇರುಘಟ್ಟ ಜೈವಿಕ ಉದ್ಯಾನವನದಲ್ಲಿ 75ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ, ಕೋವಿಡ್ ಸಮಯದಲ್ಲಿ ಮೂಲಸ್ಥಾನದ ಹೊರಗಿನ ವನ್ಯಜೀವಿಗಳ ಸಂರಕ್ಷಣೆಗಾಗಿ ಕೆಲಸ ಮಾಡಿದ ಹದಿಮೂರು ಸಿಬ್ಬಂದಿಗಳಿಗೆ ಬಹುಮಾನಗಳನ್ನು ನೀಡಲಾಯಿತು.

ಉದ್ಯಾನವನದ ನೈರ್ಮಲ್ಯದಲ್ಲಿ ತೊಡಗಿಸಿಕೊಂಡಿರುವ ಸಿಬ್ಬಂದಿಗಳು, ಕೋವಿಡ್‌ನಿಂದ ಚೇತರಿಸಿಕೊಂಡವರು, ವನ್ಯಪ್ರಾಣಿಗಳ ರಕ್ಷಣಾ ಕಾರ್ಯಾಚರಣೆಗಳು ಮತ್ತು ಪ್ರಾಣಿಗಳ ನಿರ್ವಹಣೆಯಲ್ಲಿ ತೊಡಗಿರುವ ಸಿಬ್ಬಂದಿಗಳಿಗೆ ಪುರಸ್ಕರಿಸಲಾಯಿತು. ವಿದ್ಯಾಭ್ಯಾಸದಲ್ಲಿ

ಉತ್ತಮ ಸಾಧನೆ ಮಾಡಿದ ಏಳು ಸಿಬ್ಬಂದಿಗಳ ಪ್ರತಿಭಾನ್ವಿತ ಮಕ್ಕಳಿಗೆ ನಿವೃತ್ತ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು ಆರ್. ಎಂ. ಎನ್. ಸಹಾಯ್ ಬಹುಮಾನ ವಿತರಿಸಿದರು.

ಈ ಸಂದರ್ಭದಲ್ಲಿ ಸಿಂಹಗಳ ಬಗ್ಗೆ ಅರಿವು ಮೂಡಿಸಲು, ಅವುಗಳ ಬಗ್ಗೆ ಆಸಕ್ತಿದಾಯಕ ಸಂಗತಿಗಳು ಮತ್ತು ಸಿಂಹಗಳನ್ನು ಸಂರಕ್ಷಿಸುವ ಅಗತ್ಯತೆಯ ಬಗ್ಗೆ ಜಾಗೃತಿ ಮೂಡಿಸಲು ಇಂದು "ವಿಶ್ವ ಸಿಂಹ ದಿನಾಚರಣೆ"ಯನ್ನು ಆಚರಿಸಲಾಯಿತು.

ಮೃಗಾಲಯಕ್ಕೆ ಶ್ರಮದಾನ (ಮೃಗಾಲಯದಲ್ಲಿ ಸೇವೆಗಳ ಕೊಡುಗೆ) ಮೂಲಕ ಸಿಂಹಗಳ ಪುಷ್ಟೀಕರಣದ ಸಲುವಾಗಿ ವನ್ಯಜೀವಿ ಉತ್ಸಾಹಿಗಳು ಮೇವು ಕೊಯ್ಲು ಮಾಡುವ ಮೂಲಕ ತಮ್ಮ ಸೇವೆಯನ್ನು ಕೊಡುಗೆಯಾಗಿ ಪ್ರಾಣಿಪಾಲಕರಿಗೆ ಹಸ್ತಾಂತರಿಸಿದರು.

## Independence Day & Lion Day Celebrations at BBP

**Bengaluru, August 16 (Karnataka Information):**

On the occasion of **"Azadi Ka Amrit Mahotsav"**, 75th Independence Day was celebrated at Bannerghatta Biological Park. During the celebration rewards were given to thirteen staff for their exemplary work towards ex-situ conservation of wildlife especially during COVID period.

Staff involved in hygiene of the park, recovered from COVID, wildlife rescue operations and animal management operations were rewarded.

Further seven staff children who excelled in academics were rewarded by Sri. R.M.N Sahai (Retd. PCCF).

**"World Lion Day"** was also celebrated today to create awareness about these majestic creatures, interesting facts and the need to conserve flag ship species.

Citizens also contributed towards olfactory enrichment for Lions through Mrugalayakke Shramadhana: Donation of Services at Zoo) where wildlife enthusiasts donated their services by harvesting fodder, which was handed over to the animal keeper.

## Study reveals how genes influence leaf architecture

Bengaluru, August 16 (Karnataka Information):

A recent study, published in *Nature Plants*, by researchers at the Indian Institute of Science (IISc) has shed light on how simple leaves – one of the two basic forms of leaves – develop in a plant. The team included researchers from the Department of Microbiology and Cell Biology (MCB) and their collaborators from Shodhaka Life Sciences, Bengaluru.

Plants have either simple or compound leaves. A mango tree, for instance, is said to possess simple leaves because they have a single, intact leaf blade. On the other hand, a gulmohar tree has compound leaves where the leaf blade is dissected into multiple leaflets. However, both simple and compound leaves start out as rod-like structures budding out from the meristem, the tip of the stem where stem cells are present. How these rod-like structures, referred to as primordia, give rise to simple or compound leaves has been a subject of much investigation in the past years.

In this study, the authors identified two gene families that regulate the development of simple leaves through the proteins they code for, in a plant called *Arabidopsis thaliana* – a popular model organism in plant biology. These gene families – *CIN-TCP* and *KNOX-II* – encode proteins called transcription factors that suppress the formation of new leaflets at the margin, thereby giving rise to simple leaves. The researchers simultaneously suppressed multiple members of the two gene families; this caused the simple leaves to become super-compound leaves that gave rise to leaflets indefinitely. However, when the authors independently suppressed either of the two gene families, the leaves did not turn into compound leaves, suggesting that the genes work in concert.

In addition, these mutant leaves continued to stay young and grow for as long as they had the necessary growing conditions. While *Arabidopsis* leaves typically mature in around 30 days and wither by 60 days, the leaves of these mutant plants with suppressed *CIN-TCP* and *KNOX-II* gene families grew for as long as the researchers followed them (175 days) – and could potentially go on for months or years given the necessary conditions.

"While scientists have been able to convert compound leaves to simple leaves by manipulating the expression of certain genes, our report is the first one to go the other way around," Utpal Nath, Associate Professor at MCB and senior author of the paper, says.

The researchers also found that the leaves of the plants in which the two gene families were suppressed, in contrast to normal *Arabidopsis* leaves, displayed RNA signatures of young immature leaves and actively dividing cells even beyond their typical maturation period. RNA is a chemical messenger which carries instructions from the genes required to synthesize proteins.

Besides providing insights into plant development, in the long run, the findings could initiate and nurture innovations in the food industry. As Krishna Reddy Challa, a former PhD student at MCB and co-lead author of the study, says, "one could use this technique to alter the shape of the salad leaves as one chooses, or increase their biomass. For instance, you could change the shape of a spinach leaf to look like lettuce."

"Since the leaves don't mature once the *CIN-TCP* and *KNOX-II* genes are suppressed, you can control the longevity of the plant and thereby extend its shelf-life," adds Monalisha Rath, a PhD student at MCB and co-lead author of the study.

ದ್ವೀತಿಯ ಪಿ.ಯು.ಸಿ ವಿದ್ಯಾರ್ಥಿಗಳು ವಾಸಸ್ಥಳದಿಂದ ಪರೀಕ್ಷಾ
ಕೇಂದ್ರಕ್ಕೆ ಪ್ರವೇಶ ಪತ್ರದ ಆಧಾರದ ಮೇಲೆ ಪ್ರಯಾಣಿಸಲು ಅನುಮತಿ

ಬೆಂಗಳೂರು ಆಗಸ್ಟ್ 16 (ಕರ್ನಾಟಕ ವಾರ್ತೆ) :

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ವಿದ್ಯಾರ್ಥಿ ಸಮುದಾಯದ ಹಿತವನ್ನು ಗಮನದಲ್ಲಿಟ್ಟುಕೊಂಡು ರಿಯಾಯಿತಿ ದರದಲ್ಲಿ ವಿದ್ಯಾರ್ಥಿ ಪಾಸುಗಳನ್ನು ವಾಸಸ್ಥಳದಿಂದ ಕಾಲೇಜಿಗೆ ಪ್ರಯಾಣಿಸಲು ಅವಕಾಶ ಕಲ್ಪಿಸಿ ವಿತರಣೆ ಮಾಡುತ್ತಿದೆ.

ಆದರೆ ದ್ವಿತೀಯ ಪಿ.ಯು.ಸಿ ವಿದ್ಯಾರ್ಥಿಗಳ ಪರೀಕ್ಷೆಯು ಬೇರೆ ಬೇರೆ ಕಾಲೇಜುಗಳಲ್ಲಿ ಇರುವುದರಿಂದ **ಸಂಸ್ಥೆಯು ವಿದ್ಯಾರ್ಥಿಗಳ ಹಿತವನ್ನು ಗಮನದಲ್ಲಿಟ್ಟುಕೊಂಡು ಪರೀಕ್ಷಾ ದಿನಾಂಕಗಳಂದು ಅಂದರೆ ದಿನಾಂಕ:19.08.2021 ರಿಂದ 03.09.2021 ರವರೆಗೆ ಎಲ್ಲಾ ದ್ವಿತೀಯ ಪಿ.ಯು.ಸಿ ವಿದ್ಯಾರ್ಥಿಗಳು ವಾಸಸ್ಥಳದಿಂದ ಪರೀಕ್ಷಾ ಕೇಂದ್ರದವರೆಗೆ ಬಸ್ಸಿನಲ್ಲಿ ಪ್ರಯಾಣಿಸುವಾಗ ದ್ವಿತೀಯ ಪಿ.ಯು.ಸಿ ಪ್ರವೇಶ ಪತ್ರವನ್ನು (ಅಡ್ಮೀಷನ್ ಟಿಕೇಟ್) ತೋರಿಸಿ ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಸಾರ್ವಜನಿಕ ಸಂಪರ್ಕಾಧಿಕಾರಿ. ಬಿ.ಎಂ.ಟಿ.ಸಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

## ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯು ಗುಣಮಟ್ಟ ಮಾಪನ ಕೇಂದ್ರಗಳ ವಾಯು ಗುಣಮಟ್ಟ ಸೂಚ್ಯಂಕ

ಬೆಂಗಳೂರು, ಆಗಸ್ಟ್ 16 (ಕರ್ನಾಟಕ ವಾರ್ತೆ):

**ವಾಯುಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು**

**ದಿನಾಂಕ: 16.8.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 31 | ಉತ್ತಮ | $PM_{2.5}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 45 | ಉತ್ತಮ | $PM_{10}$ |
| 3 | ಕವಿಕ, ಮೈಸೂರುರಸ್ತೆ | 48 | ಉತ್ತಮ | $PM_{2.5}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 43 | ಉತ್ತಮ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 60 | ತೃಪ್ತಿಕರ | $PM_{10}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 56 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 64 | ತೃಪ್ತಿಕರ | $PM_{10}$ |
| **(16.8.2021 at 11.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 58 | ಸಾಧಾರಣ | $PM_{10}$ |
| 9 | ಪೀಣ್ಯ | 56 | ತೃಪ್ತಿಕರ | $PM_{2.5}$ |
| 10 | ಬಿಟಿಎಂ ಲೇಔಟ್ | 58 | ತೃಪ್ತಿಕರ | $PM_{10}$ |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 16.8.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 31 | Good | $PM_{2.5}$ |
| 2 | Jayanagar 5th Block, Shalini ground | 45 | Good | $PM_{10}$ |
| 3 | KAVIKA, Mysore Road | 48 | Good | $PM_{2.5}$ |
| 4 | Rajeev Gandhi Institute of Chest Disease, NIMHANS, Hombegowda Nagar | 43 | Good | $PM_{10}$ |
| 5 | HSR Layout, near Central Silkboard | 60 | Satisfactory | $PM_{10}$ |
| 6 | City Railway Station, Magestic, Bengaluru | 56 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 64 | Satisfactory | $PM_{10}$ |
| **(16.8.2021 at 11.05 AM)** | | | | |
| 8 | BWSSB, Kadabesanahalli | 58 | Satisfactory | $PM_{10}$ |
| 9 | Peenya | 56 | Satisfactory | $PM_{2.5}$ |
| 10 | BTM Layout | 58 | Satisfactory | $PM_{10}$ |

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |